ಸಂ:ಎಎಲ್‌ಎನ್:(ಎಸ್.ಬಿ)(ಬಿ.ಹೆಚ್.):ಎಸ್‌ಆರ್:47/13-14

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ಬೆಂಗಳೂರು ಜಿಲ್ಲೆ,
ಬೆಂಗಳೂರು, ದಿನಾಂಕ: 10-10-2014.

<u>ಅಧಿಕೃತ ಜ್ಞಾಪನ</u>

ವಿಷಯ:- ಬೆಂಗಳೂರು ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, **ದೊಡ್ಡತೋಗೂರು ಗ್ರಾಮದ ಸರ್ವೆ ನಂ. 135/1 ರಲ್ಲಿ 0-05 ಗುಂಟೆ** ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ **ವಾಸದ** ಉದ್ದೇಶಕ್ಕಾಗಿ ಭೂ ಪರಿವರ್ತನೆ ಕೋರಿ **ಶ್ರೀಮತಿ ಶಾಂತಮ್ಮ ಕೋಂ ಎಲ್. ಆಂಜಿನಪ್ಪ, ಚಿಕ್ಕತೋಗೂರು ಗ್ರಾಮ, ಬೇಗೂರು ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು** ರವರು ಸಲ್ಲಿಸಿರುವ ಅರ್ಜಿ ದಿನಾಂಕ: 24-07-2014.

ಉಲ್ಲೇಖ:-
1. ಸರ್ಕಾರದ ಸುತ್ತೋಲೆ ಸಂಖ್ಯೆ:ಆರ್‌ಡಿ 7 ಎಲ್‌ಜಿಪಿ 95 ದಿನಾಂಕ: 7-6-1999.
2. ಸರ್ಕಾರದ ಸುತ್ತೋಲೆ ಸಂಖ್ಯೆ:ಆರ್.ಡಿ:56:ಎಲ್‌ಜಿಪಿ/2008 ದಿನಾಂಕ:10-9-08 ಮತ್ತು 24-9-2008.
3. ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು, ರವರ ವರದಿ ಸಂಖ್ಯೆ:ಎಎಲ್‌ಎನ್: ಎಸ್‌ಆರ್:/280/14-15, ದಿನಾಂಕ: 11-08-2014.
4. ಭೂ ಪರಿವರ್ತನಾ ಶುಲ್ಕ ರೂ. 6,807-00 ಹಾಗೂ ಮೋಡಿ ಶುಲ್ಕ ರೂ. 55-00 ಒಟ್ಟು ರೂ.6,862-00 ಗಳನ್ನು ಚಲನ್ ನಂಬರ್ 21 & 22 ದಿ: 10-10-2014 ರಂದು ಎಸ್.ಬಿ.ಎಂ.ಶಾಖೆಗೆ ಅರ್ಜಿದಾರರು ಜಮಾ ಮಾಡಿರುತ್ತಾರೆ.
5. ಸಹಾಯಕ ನಿರ್ದೇಶಕರು (ದಕ್ಷಿಣ), ನಗರ ಯೋಜನಾ ವಿಭಾಗ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ರವರ ಪತ್ರ ಸಂಖ್ಯೆ:ಬೆಂಅಪ್ರಾ/ನಯೋಸ/ಸಿಓಎಸ್-657/706/2014-15, ದಿನಾಂಕ: 01-09-2014 ಮತ್ತು ಉಪ ಆಯುಕ್ತರು(ಭೂ.ಸ್ವಾ.) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರ ಪತ್ರದ ಸಂಖ್ಯೆ:ಬೆಂ.ಅ.ಪ್ರಾ/ಉಪ(ಭೂಸ್ವಾ)/359/14-15, ದಿನಾಂಕ: 25-08-2014.

:: 0 ::

ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ರ ಕಲಂ 95(2), 95(4) ಮತ್ತು 95(7) ರ ಷರತ್ತುಗಳು, ಹಾಗೂ ಷರತ್ತುಗಳಿಗೊಳಪಡಿಸಿ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ನಿಯಮಗಳು 1994 ರ ನಿಯಮ 107(1) ರಂತೆ ಎಕರೆ ಒಂದಕ್ಕೆ ರೂ.54,450-00 (ರೂಪಾಯಿಗಳು ಐವತ್ನಾಲ್ಕು ಸಾವಿರದ ನಾಲ್ಕು ನೂರ ಐವತ್ತು) ಗಳಂತೆ ಅರ್ಜಿದಾರರು ಉಲ್ಲೇಖ (4) ರಲ್ಲಿ ನಮೂದಿಸಿರುವಂತೆ ಹಣವನ್ನು ಜಮಾ ಮಾಡಿದ ಮೇರೆಗೆ, ಅರ್ಜಿದಾರರಾದ **ಶ್ರೀಮತಿ ಶಾಂತಮ್ಮ ಕೋಂ ಎಲ್. ಆಂಜಿನಪ್ಪ, ಚಿಕ್ಕತೋಗೂರು ಗ್ರಾಮ, ಬೇಗೂರು ಹೋಬಳಿ, ಬೆಂಗಳೂರು** ದಕ್ಷಿಣ ತಾಲ್ಲೂಕು, ರವರ ಅರ್ಜಿಯನ್ನು ಪರಿಗಣಿಸಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, **ದೊಡ್ಡತೋಗೂರು ಗ್ರಾಮದ ಸರ್ವೆ ನಂ. 135/1 ರಲ್ಲಿ 0-05 ಗುಂಟೆ** ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ **ವಾಸದ** ಉದ್ದೇಶಕ್ಕಾಗಿ ಬಳಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭೂ ಪರಿವರ್ತನಾ ಆದೇಶವನ್ನು ಹೊರಡಿಸಲಾಗಿದೆ.

1. ಈ ಭೂಮಿಯು ಯಾವ ಉದ್ದೇಶಕ್ಕಾಗಿ ಪರಿವರ್ತನೆಯಾಗಿದೆಯೋ ಆ ಉದ್ದೇಶಕ್ಕೆ ಉಪಯೋಗಿಸಿಕೊಳ್ಳಲು ಸಕ್ಷಮ ಪ್ರಾಧಿಕಾರ ಅಂದರೆ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿ.ಎಂ.ಆರ್.ಡಿ.ಎ./(ಸ್ಥಳೀಯ ಯೋಜನಾ ಪ್ರಾಧಿಕಾರ)/ ಬಿ.ಎಂ.ಐ.ಸಿ.ಎ.ಪಿ.ಎ/ ಮಾಲಿನ್ಯ ನಿಯಂತ್ರಣಾ ಮಂಡಳಿ ರವರಿಂದ ಮಂಜೂರಾತಿಯನ್ನು ಪಡೆಯದ ಹೊರತು ಈ ಆದೇಶವು ಅನುಭವದಾರನಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ.
2. ಈ ಭೂ ಪರಿವರ್ತಿತ ಜಮೀನನ್ನು **ವಾಸದ** ಉದ್ದೇಶಕ್ಕಾಗಿ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು. ಈ ಜಮೀನನ್ನು ಪೂರ್ವಾನುಮತಿ ಇಲ್ಲದೇ ಬೇರೆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಬಾರದು.
3. ಈ ಜಮೀನಿನಲ್ಲಿ ಉದ್ದೇಶಿಸಿರುವ ಬಡಾವಣೆ ನಕ್ಷೆ ಹಾಗೂ ಪರವಾನಗಿ ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿ.ಎಂ.ಆರ್.ಡಿ.ಎ./(ಸ್ಥಳೀಯ ಯೋಜನಾ ಪ್ರಾಧಿಕಾರ)/ ಬಿ.ಎಂ.ಐ.ಸಿ.ಎ.ಪಿ.ಎ/ ಪ್ರಾಧಿಕಾರದಿಂದ ಅನುಮೋದಿಸಿಕೊಂಡು ಆ ನಂತರ ಅನುಮೋದನೆಗೊಂಡ ನಕ್ಷೆಗೆ ಅನುಗುಣವಾಗಿ ಕಟ್ಟಡವನ್ನು ಕಟ್ಟುವುದು. ಸದರಿ ಜಮೀನಿನಲ್ಲಿ ಲೇಔಟ್ / ಕಟ್ಟಡ ನಕ್ಷೆಗೆ ಅನುಮೋದನೆ ಪಡೆಯದೆ ಪರಭಾರೆ ಮಾಡಕೂಡದು.

—2.

Scanned by CamScanner

4. ಇತರೆ ಅವಶ್ಯವಾದ ರಸ್ತೆ ಜಾಗ, ರಸ್ತೆ ಮಾರ್ಜಿನ್, ಉದ್ಯಾನವನ, ಸಿ.ಎ.ನಿವೇಶನ ಖಾಲಿ ಜಾಗ, ಇತ್ಯಾದಿಗಳು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿ.ಎಂ.ಆರ್.ಡಿ.ಎ./(ಸ್ಥಳೀಯ ಯೋಜನಾ ಪ್ರಾಧಿಕಾರ)/ ಬಿ.ಎಂ.ಐ.ಸಿ.ಎ.ಪಿ.ಎ/ ಪ್ರಾಧಿಕಾರದಿಂದ ಅನುಮೋದಿಸಿದ ಬಡಾವಣೆ ನಕ್ಷೆ ಪ್ರಕಾರ ಹಾಗೂ ನಿರ್ದಿಷ್ಟಪಡಿಸಿದ ನಿಯಮಗಳ ರೀತ್ಯಾ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು.

5. ಸಂಬಂಧಪಟ್ಟ ಪ್ರಾಧಿಕಾರದಿಂದ ಅನುಮೋದಿತ ನಕ್ಷೆ ಪಡೆಯದೆ ನಿವೇಶನಗಳನ್ನು/ಕಟ್ಟಡಗಳನ್ನು ಸಂಬಂಧಪಟ್ಟ ನೋಂದಣಾಧಿಕಾರಿಗಳಿಂದ / ಉಪನೋಂದಣಾಧಿಕಾರಿಗಳಿಂದ ನೋಂದಾವಣೆ ಮಾಡತಕ್ಕದ್ದಲ್ಲ, ಖಾತೆದಾರರು ಒಂದು ವೇಳೆ ಭೂ ಪರಿವರ್ತನೆ ಮಂಜೂರು ಮಾಡಿರುವ ಜಮೀನಿನ ಪೂರ್ಣ ವಿಸ್ತೀರ್ಣವನ್ನು ಮಾರಾಟ ಮಾಡಲು ಉದ್ದೇಶಿಸಿದಲ್ಲಿ ಈ ಆದೇಶ ಅಡ್ಡಿ ಬರುವುದಿಲ್ಲ.

6. ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಜಮೀನಿನಲ್ಲಿ ನಿವೇಶನದಾರರಿಗೆ ನಾಗರೀಕ ಸೌಲಭ್ಯಗಳಾದ ವಿದ್ಯುಚ್ಛಕ್ತಿ, ಕುಡಿಯುವ ನೀರು ರಸ್ತೆ, ಸರಬರಾಜು, ಒಳಚರಂಡಿ ವ್ಯವಸ್ಥೆ ಇತ್ಯಾದಿಗಳನ್ನು ಆರೋಗ್ಯ ನೈರ್ಮಲೀಕರಣ ಹಾಗೂ ಭದ್ರತೆಗಳ ಉದ್ದೇಶದಿಂದ ಈ ಎಲ್ಲಾ ಸೌಲಭ್ಯಗಳನ್ನು ಕಾನೂನು ರೀತ್ಯ ಒದಗಿಸಿಕೊಡುವುದು ಅರ್ಜಿದಾರರ ಜವಾಬ್ದಾರಿಯಾಗಿರುತ್ತದೆ.

**7. ಈ ಜಮೀನಿಗೆ ತಾಕು ಪೋಟ್ ಖರಾಬ್ ಜಮೀನು ಇದ್ದಲ್ಲಿ, ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 67 ರಂತೆ ಸರ್ಕಾರದ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು. ತಹಶೀಲ್ದಾರರವರು ಈ ಬಾಬ್ತು ಆರ್.ಟಿ.ಸಿ.ಯಲ್ಲಿ ನಮೂದಿಸತಕ್ಕದ್ದು.**

8. ಸರ್ಕಾರದ ಆದೇಶ ಸಂಖ್ಯೆ ಪಿಡಬ್ಲ್ಯೂಡಿ 7556–665 ಆರ್ ಮತ್ತು ಬಿ–6–54–5 ಮತ್ತು ಕೇಂದ್ರ ಸರ್ಕಾರದ ಸಾರಿಗೆ ಇಲಾಖೆಯ ಪತ್ರದ ನಂ. ಪಿ.1/7(11)67, ದಿನಾಂಕ: 01–01–1966 ರಂತೆ ಸರ್ಕಾರವು ಕಾಲಕಾಲಕ್ಕೆ ನೀಡುವ ಆದೇಶದಂತೆ ಈ ಜಮೀನಿನಲ್ಲಿ ಕಟ್ಟಲು ಉದ್ದೇಶಿಸಿರುವ ಕಟ್ಟಡವು ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 40 ಮೀಟರ್‌ಗಳ ಅಂತರವನ್ನು ಮತ್ತು ಜಿಲ್ಲಾ ಹೆದ್ದಾರಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 25 ಮೀಟರ್‌ಗಳ ಅಂತರವನ್ನು ಕಾಯ್ದಿರಿಸಬೇಕು ಹಾಗೂ ಈ ಖಾಲಿ ಪ್ರದೇಶದಲ್ಲಿ ಯಾವುದೇ ಕಟ್ಟಡವನ್ನು ಕಟ್ಟಬಾರದು.

9. ಈ ಭೂ ಪರಿವರ್ತನಾ ಜಮೀನಿನಲ್ಲಿ ಸ್ಥಾಪಿಸಲಾಗುವ ಕೈಗಾರಿಕಾ ಘಟಕಗಳು ಹೊರದೂಡುವ ಹೊಗೆ, ಅನಿಲ, ಇತರೆ ಕಲ್ಮಶಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಿ ಸಾರ್ವಜನಿಕರ ಆರೋಗ್ಯಕ್ಕೆ ಯಾವುದೇ ರೀತಿಯ ಹಾನಿಯಾಗದಂತೆ ಹಾಗೂ ಪರಿಸರ ಮಾಲಿನ್ಯವಾಗದಂತೆ ನೋಡಿಕೊಳ್ಳತಕ್ಕದ್ದು. ಕೈಗಾರಿಕಾ ಉದ್ದೇಶಕ್ಕಾಗಿ ಭೂ ಪರಿವರ್ತಿತ ಜಮೀನಿನಲ್ಲಿ ಸ್ಥಾಪಿಸುವ ಕೈಗಾರಿಕಾ ಘಟಕಗಳು ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ಪರಿಸರ ಇಲಾಖೆಯ ಅನುಮತಿ ಹೊಂದಿರತಕ್ಕದ್ದು.

10. ಈ ಆದೇಶವು ಸದರಿ ಜಮೀನಿಗೆ ಸಂಬಂಧಪಟ್ಟಂತೆ ಯಾವುದೇ ನ್ಯಾಯಾಲಯದಲ್ಲಿನ ದಾವೆ / ರಿಟ್ ಅರ್ಜಿ/ ಮೇಲ್ಮನವಿಯ ತೀರ್ಪಿಗೆ ಒಳಪಟ್ಟಿರುತ್ತದೆ.

11. ಪ್ರಸ್ತಾವಿತ ಜಮೀನಿನ ಬಗ್ಗೆ ಯಾವುದೇ ಭೂಸ್ವಾಧೀನ ಪ್ರಕ್ರಿಯೆಗೆ ಒಳಪಟ್ಟಿದ್ದಲ್ಲಿ ಈ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ.

12. ಪ್ರಶ್ನಿತ ಜಮೀನು ಸರ್ಕಾರಿ ಜಮೀನು ವ್ಯಾಪ್ತಿಗೆ ಒಳಪಟ್ಟಿದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 136(3) ರ ಅಡಿ ವಿಚಾರಣೆ ನಡೆಸಿ ಹೊರಡಿಸುವ ತೀರ್ಮಾನಕ್ಕೆ ಒಳಪಟ್ಟಿರುತ್ತದೆ.

13. ಪರಿಷ್ಕೃತ ಮಾಸ್ಟರ್ ಪ್ಲಾನ್ –2015 ರಲ್ಲಿ ಸೂಕ್ಷ್ಮ ವಲಯ (Sensitive Zone) ನಲ್ಲಿ ಬರುವ ಪ್ರದೇಶಗಳಿಗೆ ಸಂಬಂಧಪಟ್ಟ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೇ ಉದ್ದೇಶಿತ ಜಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿಯನ್ನು ಕೈಗೊಳ್ಳಬಾರದು.

14. ಉದ್ದೇಶಿತ ಜಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿ ಚಟುವಟಿಕೆಗಳನ್ನು ಕೈಗೊಳ್ಳಬೇಕಾದಲ್ಲಿ ಪ್ರಾಧಿಕಾರದಿಂದ ರಚಿತವಾದ ಉಪ ಸಮಿತಿಯ ನಿರ್ಣಯದಂತೆ ನಕ್ಷೆಗಳನ್ನು ಅನುಮೋದಿಸಿಕೊಳ್ಳತಕ್ಕದ್ದು.

15. ಪ್ರಶ್ನಿತ ಜಮೀನು ಮಂಜೂರಾದ ಸರ್ಕಾರಿ ಜಮೀನಾಗಿದ್ದಲ್ಲಿ ತಕ್ಷಣವೇ ಪಕ್ಕ ಪೋಡಿ ಮಾಡಿಸುವ ಷರತ್ತಿಗೆ ಒಳಪಟ್ಟಿರುತ್ತದೆ.

16. ಅರ್ಜಿದಾರರು ಯಾವುದೇ ಸತ್ಯಾಂಶಗಳನ್ನು ಮರೆ ಮಾಚಿ, ಅನಧಿಕೃತ ದಾಖಲೆಗಳ ಮೇಲೆ ಈ ಅಧಿಕೃತ ಜ್ಞಾಪನ ಪಡೆದಿರುವುದು ಸ್ಪಷ್ಟಪಟ್ಟಲ್ಲಿ ತನ್ನಿಂತಾನೇ ರದ್ದುಗೊಳ್ಳುತ್ತದೆ ಹಾಗೂ ಇದರಿಂದ ಅರ್ಜಿದಾರರಿಗಾಗಲೀ ಅಥವಾ ಅವರ ಉತ್ತರಾಧಿಕಾರಿಗಳಿಗಾಗಲೀ ಆಗುವ ಯಾವುದೇ ಲುಕ್ಸಾನಿಗೆ ಸರ್ಕಾರವಾಗಲೀ ಅಥವಾ ಈ ಪ್ರಾಧಿಕಾರವಾಗಲೀ ಯಾವುದೇ ರೀತಿಯ ಜವಾಬ್ದಾರರಾಗಿರುವುದಿಲ್ಲ. ಇದರ ಪೂರ್ಣ ಹೊಣೆಗಾರಿಕೆ ಅರ್ಜಿದಾರರದ್ದೇ ಆಗಿರುತ್ತದೆ.



Scanned by CamScanner

17. ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಭೂ ಪರಿವರ್ತನೆ ಆದೇಶವನ್ನು ಯಾವುದೇ ಸೂಚನೆ ನೀಡದೇ ರದ್ದುಗೊಳಿಸಲಾಗುವುದು ಮತ್ತು ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 96 ರಂತೆ ದಂಡ ಶುಲ್ಕವನ್ನು ವಿಧಿಸಲು ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು. ಅಲ್ಲದೇ ಈ ಜಮೀನಿನಲ್ಲಿ ಅನಧಿಕೃತವಾಗಿ ಕಟ್ಟಿದ ಕಟ್ಟಡಗಳನ್ನು ಯಾವುದೇ ಪರಿಹಾರ ನೀಡದೇ ಕೆಡವಲು ಕ್ರಮ ತೆಗೆದುಕೊಳ್ಳಲಾಗುವುದು. ಹಾಗೂ ಅದಕ್ಕೆ ತಗಲುವ ವೆಚ್ಚವನ್ನು ಭೂ ಕಂದಾಯ ಬಾಕಿ ಎಂದು ಖಾತೇದಾರರಿಂದ ವಸೂಲಿ ಮಾಡಲಾಗುವುದು.

18. ಸಹಾಯಕ ನಿರ್ದೇಶಕರು (ದಕ್ಷಿಣ), ನಗರ ಯೋಜನಾ ವಿಭಾಗ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರ ದಿನಾಂಕ: 01-09-2014 ರ ಪತ್ರದಲ್ಲಿ ಸೂಚಿಸಿರುವ ಷರತ್ತಿಗೆ ಒಳಪಡಿಸಿದೆ.

<u>ಷೆಡ್ಯೂಲ್ ವಿವರ</u>

ಬೆಂಗಳೂರು ಜಿಲ್ಲೆ ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, **ದೊಡ್ಡತೋಗೂರು ಗ್ರಾಮದ ಸರ್ವೆ ನಂ. 135/1 ರಲ್ಲಿ 0-05 ಗುಂಟೆ** ವಿಸ್ತೀರ್ಣದ ಭೂ ಪರಿವರ್ತಿತ ಜಮೀನಿನ ಚಕ್ಕುಬಂದಿ:

-: ಚೆಕ್ಕುಬಂದಿ :-

| | |
|---|---|
| ಪೂರ್ವಕ್ಕೆ | ಸರ್ವೆ ನಂ. 135/1 ರ ಉಳಿಕೆ ಜಮೀನು |
| ಪಶ್ಚಿಮಕ್ಕೆ | ರಸ್ತೆ ಹಾಗೂ ಸರ್ವೆ ನಂ. 134 ರ ಜಮೀನು |
| ಉತ್ತರಕ್ಕೆ | ಸರ್ವೆ ನಂ. 135/1 ರ ಉಳಿಕೆ ಜಮೀನು |
| ದಕ್ಷಿಣಕ್ಕೆ | ಸರ್ವೆ ನಂ. 135/1 ರ ಉಳಿಕೆ ಜಮೀನು |

ಜಿಲ್ಲಾಧಿಕಾರಿಗಳ ಕಛೇರಿ ಬೆಂಗಳೂರು ಬೆಂಗಳೂರು ನಗರ ಜಿಲ್ಲೆ

ಸಹಿ/-
(ವಿ. ಶಂಕರ್),
ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.

<u>ಪ್ರತಿಯನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ/ ಮಾಹಿತಿಗಾಗಿ ಕೆಳಕಂಡವರಿಗೆ ಕಳುಹಿಸಲಾಗಿದೆ.</u>


1. ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ರವರಿಗೆ ಮೂಲ ಕಡತ ಹಾಗೂ ಚಲನ್‌ದೊಂದಿಗೆ ಕಳುಹಿಸುತ್ತಾ ಈ ಆದೇಶದ ಪ್ರಕಾರ ಸಂಬಂಧಪಟ್ಟ ಸರ್ವೆ ನಂಬರ್ ಭೂ ಪರಿವರ್ತನೆಯಾಗಿದೆ ಎಂದು ಸಂಬಂಧಪಟ್ಟ ಆರ್.ಟಿ.ಸಿ.ಯಲ್ಲಿ ಕೂಡಲೇ ನಮೂದಿಸತಕ್ಕದ್ದು. ಮತ್ತು ಈ ಜಮೀನಿಗೆ ಖಾತೇದಾರರ ಲೆಕ್ಕದಲ್ಲಿ ಸದರಿ ಜಮೀನಿನ ಭೂ ಕಂದಾಯವನ್ನು ಕಡಿಮೆಗೊಳಿಸುವುದು.
2. ಸಹಾಯಕ ನಿರ್ದೇಶಕರು (ದಕ್ಷಿಣ), ನಗರ ಯೋಜನಾ ಸದಸ್ಯರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
3. ಉಪವಿಭಾಗಾಧಿಕಾರಿಗಳು, ಬೆಂಗಳೂರು ದಕ್ಷಿಣ ಉಪವಿಭಾಗ, ಕಂದಾಯ ಭವನ, ಬೆಂಗಳೂರು. ರವರಿಗೆ
4. ಭೂ ಮಾಪನ ತಾಂತ್ರಿಕ ಸಹಾಯಕರು ಹಾಗೂ ಪದನಿಮಿತ್ತ ಭೂ ದಾಖಲೆಗಳ ಉಪನಿರ್ದೇಶಕರು, ಜಿಲ್ಲಾಧಿಕಾರಿಗಳ ಕಛೇರಿ,ಬೆಂಗಳೂರು. ಇವರಿಗೆ ಆರ್.ಟಿ.ಸಿ ಹಾಗೂ ನಕ್ಷೆಯ ಪ್ರತಿಯೊಂದಿಗೆ ಕಳುಹಿಸುತ್ತಾ ಭೂ ಪರಿವರ್ತನಾ ಪೋಡಿ ಕಾರ್ಯವನ್ನು ಜರೂರಾಗಿ ಪೂರೈಸಲು ಸೂಚಿಸಿದೆ.
5. ಉಪನೋಂದಣಾಧಿಕಾರಿಗಳು, ಬೊಮ್ಮನಹಳ್ಳಿ, ಬೇಗೂರು ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು ರವರಿಗೆ
6. ಅರ್ಜಿದಾರರಾದ **ಶ್ರೀಮತಿ ಶಾಂತಮ್ಮ ಕೋಂ ಎಲ್. ಆಂಜಿನಪ್ಪ, ಚಿಕ್ಕತೋಗೂರು ಗ್ರಾಮ, ಬೇಗೂರು ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು** ರವರಿಗೆ ದೃಢೀಕೃತ ಅಂಚೆ ಮೂಲಕ ಕಳುಹಿಸಲಾಗಿದೆ.
7. ಹೆಚ್ಚಿನ ಪ್ರತಿ.

ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.

Scanned by CamScanner

ಗ್ರಾಮ:- [illegible] . ಹೋ॥ [illegible]. ತಾ॥ ಬೆಂ.ದಕ್ಷಿಣ ಜಿ॥ ಬೆಂ.ನಗರ

ರಿ॥ಸ॥ನಂ॥ 135/1 ರ ಭೂಪರಿವರ್ತನೆಯ ಬಾಬ್ತು ನಕ್ಷೆ




| ಚಕ್ಕುಬಂದಿ | | | | |
|---|---|---|---|---|
| ಸ.ನಂ. | ಪೂರ್ವ :- | ಪಶ್ಚಿಮ :- | ಉತ್ತರ :- | ದಕ್ಷಿಣ :- |
| 135/1 | ಸ.ನಂ.135/1 ರ ಬಾಕಿ | ರಸ್ತೆ, ಗ್ರಾ.ಸ.ನಂ. 134 | ಸ.ನಂ.-135/1 ರ ಬಾಕಿ | ಸ.ನಂ.-135/1 ರ ಬಾಕಿ |

| ಕ್ರಮ ಸಂಖ್ಯೆ | ಸರ್ವೆ ನಂಬರ್ | ಒಟ್ಟು ವಿಸ್ತೀರ್ಣ | ಆಕಾರ ಬಂದಿನಂತೆ ಖರಾಬು | | | ಅರ್ಜಿದಾರರಿಗೆ ಹಕ್ಕು ಇರುವ ವಿಸ್ತೀರ್ಣ | ಭೂಪರಿವರ್ತನೆ ಕೋರಿರುವ ವಿಸ್ತೀರ್ಣ | ಭೂಪರಿವರ್ತನೆ ಪ್ರದೇಶದಲ್ಲಿನ ಖರಾಬು | | | |
|---|---|---|---|---|---|---|---|---|---|---|---|
| | | | 5ಎ | 5ಬಿ | 5ಸಿ | | | 5ಎ | 5ಬಿ | 5ಸಿ | ಷರಾ |
| 1 | 135/1 | 4-36 | – | – | – | 00-05 | 00-05 | – | – | – | . |

1 ▭ ಈ ಬಣ್ಣದಿಂದ ಗುರ್ತಿಸಿರುವ ಪ್ರದೇಶವು 00-05 ಇದ್ದು [illegible] ರವರು [illegible] ಉದ್ದೇಶಕ್ಕೆ ಭೂಪರಿವರ್ತನೆ ಕೋರಿರುತ್ತಾರೆ.

2 ಭೂಪರಿವರ್ತನೆ ಕೋರಿರುವ ಪ್ರದೇಶದಲ್ಲಿ [illegible] .

3 ▭ ಈ ಬಣ್ಣದಿಂದ ಗುರ್ತಿಸಿರುವುದು ಸಂಪರ್ಕ ರಸ್ತೆಯಾಗಿರುತ್ತದೆ.

4 ಈ ನಕ್ಷೆಯನ್ನು ಎ.ಎಲ್.ಎನ್.ಎಸ್.ಆರ್_________/ ರ ಮೇರೆಗೆ ತಯಾರಿಸಿದೆ.

ತಯಾರಿಸಿದವರು

[signature]

ತಾಲ್ಲೂಕು ಸರ್ವೇಯರ್
ಬೆಂಗಳೂರು ದಕ್ಷಿಣ ತಾಲ್ಲೂಕು

Scanned by CamScanner

1

**ಕರ್ನಾಟಕ ಸರ್ಕಾರ**

ನಂ : ಎಎಲ್‌ಎನ್ ಎಸ್‌ಆರ್ [ಎಸ್.ಬಿ.] ಎಸ್‌ಆರ್ 113/2009-10

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ಬೆಂಗಳೂರು ಜಿಲ್ಲೆ,
ಬೆಂಗಳೂರು, ದಿನಾಂಕ : 26.3.2010.

**ಅ ಧಿ ಕೃ ತ ಜ್ಞಾ ಪ ನ**

ವಿಷಯ : ಬೆಂಗಳೂರು ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ದೊಡ್ಡತೋಗೂರು ಗ್ರಾಮದ ಸರ್ವೆ ನಂ : 135ರಲ್ಲಿ 0-12 ಗುಂಟೆ, ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ, ವಾಣಿಜ್ಯ ಉದ್ದೇಶಕ್ಕೆ ಭೂ ಪರಿವರ್ತನೆ ಕೋರಿ ಶ್ರೀ ಎಂ. ಶ್ರೀನಿವಾಸ್, ದೊಡ್ಡತೋಗೂರು ಗ್ರಾಮ, ಬೇಗೂರು ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ರವರು ಸಲ್ಲಿಸಿರುವ ಅರ್ಜಿ ದಿನಾಂಕ : 2.2.2010.

ಉಲ್ಲೇಖ :
1. ಸರ್ಕಾರದ ಸುತ್ತೋಲೆ ಸಂಖ್ಯೆ : ಆರ್‌ಡಿ 7 ಎಲ್‌ಜಿಪಿ 1995, ದಿನಾಂಕ : 7.6.1999.
2. ಸರ್ಕಾರದ ಸುತ್ತೋಲೆ ಸಂಖ್ಯೆ : ಆರ್‌ಡಿ 56 ಎಲ್‌ಜಿಪಿ 2008, ದಿನಾಂಕ : 10.9.2008 & 24.9.2008.
3. ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರುರವರ ವರದಿ ನಂ : ಎಎಲ್‌ಎನ್ ಎಸ್‌ಆರ್ 591/2009-10, ದಿನಾಂಕ : 16.2.2010.
4. ಭೂ ಪರಿವರ್ತನಾ ಶುಲ್ಕ ರೂ. 52,272-00 ಹಾಗೂ ಪೋಡಿ ಶುಲ್ಕ ರೂ. 55-00 ಸೇರಿ ಒಟ್ಟು ರೂ. 52,327-00ಗಳನ್ನು ಚಲನ್ ಸಂಖ್ಯೆ : 210 & 211 ರಂತೆ ದಿನಾಂಕ : 25.3.2010 ರಂತೆ ಖಜಾನೆಗೆ ಅರ್ಜಿದಾರರು ಜಮಾ ಮಾಡಿರುತ್ತಾರೆ.
5. ನಗರ & ಗ್ರಾಮಾಂತರ ಯೋಜನಾ ಹೆಚ್ಚುವರಿ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿಗಳು, ಬಿ.ಎಂ.ಐ.ಸಿ.ಪಿ.ಎ., ಬೆಂಗಳೂರು ಇವರ ಪತ್ರ ಸಂಖ್ಯೆ : ಬಿಎಂಐಸಿಪಿಎ 101 ಭೂಪ ದೊಡ್ಡತೋಗೂರು 1561/2009-10, ದಿನಾಂಕ : 11.3.2010.
6. ಏಕಗವಾಕ್ಷಿ ಸಮಿತಿ ಸಭೆಯ ನಡವಳಿ ದಿನಾಂಕ : 29.11.2006.

% % % % % %

ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ರ ಕಲಂ 95[2], 95[4] ಮತ್ತು 95[7] ರ ಷರತ್ತುಗಳು, ಹಾಗೂ ಈ ಕೆಳಕಂಡ ಷರತ್ತುಗಳಿಗೊಳಪಡಿಸಿ ಕರ್ನಾಟಕ ಭೂ ಕಂದಾಯ [ತಿದ್ದುಪಡಿ] ನಿಯಮಗಳು 1994ರ ನಿಯಮ 107[1] ರಂತೆ ಎಕರೆ ಒಂದಕ್ಕೆ ರೂ 1,74,240-00 [ಒಂದು ಲಕ್ಷದ ಎಪ್ಪತ್ತು ನಾಲ್ಕು ಸಾವಿರದ ಇನ್ನೂರ ನಲವತ್ತು ರೂ.ಗಳು ಮಾತ್ರ] ಗಳಂತೆ ಅರ್ಜಿದಾರರು ಉಲ್ಲೇಖ [4] ರಲ್ಲಿ ನಮೂದಿಸಿರುವಂತೆ ಹಣವನ್ನು ಜಮಾ ಮಾಡಿ ಚಲನ್‌ನ್ನು ಹಾಜರು ಪಡಿಸಿರುವ ಮೇರೆಗೆ ಅರ್ಜಿದಾರರಾದ ಶ್ರೀ ಎಂ. ಶ್ರೀನಿವಾಸ್, ದೊಡ್ಡತೋಗೂರು ಗ್ರಾಮ, ಬೇಗೂರು ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ರವರ ಅರ್ಜಿಯನ್ನು ಪರಿಗಣಿಸಿ ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ದೊಡ್ಡತೋಗೂರು ಗ್ರಾಮದ ಸರ್ವೆ ನಂ : 135 ರಲ್ಲಿ 0-12 ಗುಂಟೆ, ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಣಿಜ್ಯ ಉದ್ದೇಶಕ್ಕೆ ಬಳಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭೂ ಪರಿವರ್ತನಾ ಆದೇಶವನ್ನು ಹೊರಡಿಸಲಾಗಿದೆ:

1. ಈ ಭೂಮಿಯು ಯಾವ ಉದ್ದೇಶಕ್ಕಾಗಿ ಪರಿವರ್ತನೆಯಾಗಿದೆಯೋ ಆ ಉದ್ದೇಶಕ್ಕೆ ಉಪಯೋಗಿಸಿಕೊಳ್ಳಲು ಸಕ್ಷಮ ಪ್ರಾಧಿಕಾರಿಯಿಂದ ಅಂದರೆ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ : ಬಿ.ಎಂ.ಆರ್.ಡಿ.ಎ. [ಸ್ಥಳೀಯ ಯೋಜನಾ ಪ್ರಾಧಿಕಾರ] : ಬಿ.ಎಂ.ಐ.ಸಿ.ಪಿ.ಎ : ಮಾಲಿನ್ಯ ನಿಯಂತ್ರಣಾ ಮಂಡಳಿ ಮಂಜೂರಾತಿಯನ್ನು ಪಡೆಯದ ಹೊರತು ಈ ಆದೇಶವು ಅನುಭವದಾರನಿಗ ಯಾವುದೇ ಹಕ್ಕನ್ನು ನೀಡುವುದಿಲ್ಲ.

Scanned by CamScanner

2. ಈ ಪರಿವರ್ತಿತ ಜಮೀನನ್ನು ವಾಣಿಜ್ಯ ಉದ್ದೇಶಕ್ಕೆ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು. ಈ ಜಮೀನನ್ನು ಪೂರ್ವಾನುಮತಿ ಇಲ್ಲದೆ ಬೇರೆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಬಾರದು.

3. ಈ ಜಮೀನಿನಲ್ಲಿ ಉದ್ದೇಶಿಸಿರುವ ಬಡಾವಣೆ ನಕ್ಷೆ ಹಾಗೂ ಪರವಾನಗಿ ಇತ್ಯಾದಿಗಳನ್ನು ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ : ಬಿ.ಎಂ.ಆರ್.ಡಿ.ಎ. [ಸ್ಥಳೀಯ ಯೋಜನಾ ಪ್ರಾಧಿಕಾರ] : ಬಿ.ಎಂ.ಐ.ಸಿ.ಎ.ಪಿ.ಎ : ಪ್ರಾಧಿಕಾರದಿಂದ ಅನುಮೋದಿಸಿಕೊಂಡು ಆ ನಂತರ ಅನುಮೋದನೆಗೊಂಡ ನಕ್ಷೆಗೆ ಅನುಗುಣವಾಗಿ ಕಟ್ಟಡವನ್ನು ಕಟ್ಟುವುದು. ಸದರಿ ಜಮೀನಿನಲ್ಲಿ ಲೇಔಟ್ ಕಟ್ಟಡ ನಕ್ಷೆಗೆ ಅನುಮೋದನೆ ಪಡೆಯದೆ ಪರಭಾರೆ ಮಾಡಕೂಡದು.

4. ಇತರೆ ಅವಶ್ಯವಾದ ರಸ್ತೆ ಜಾಗ, ರಸ್ತೆ ಮಾರ್ಜಿನ್, ಖಾಲಿ ಜಾಗ ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ : ಬಿ.ಎಂ.ಆರ್.ಡಿ.ಎ. [ಸ್ಥಳೀಯ ಯೋಜನಾ ಪ್ರಾಧಿಕಾರ] : ಬಿ.ಎಂ.ಐ.ಸಿ.ಎ.ಪಿ.ಎ : ಮಾಲಿನ್ಯ ನಿಯಂತ್ರಣಾ ಮಂಡಳಿ ಪ್ರಾಧಿಕಾರದಿಂದ ಅನುಮೋದಿಸಿದ ಬಡಾವಣೆ ನಕ್ಷೆ ಪ್ರಕಾರ ಹಾಗೂ ನಿರ್ದಿಷ್ಟಪಡಿಸಿದ ನಿಯಮಗಳ ರೀತ್ಯ ಸದರಿ ಉದ್ದೇಶಕ್ಕೆ ಕಾಯ್ದಿರಿಸತಕ್ಕದ್ದು.

5. **ಸಂಬಂಧಪಟ್ಟ ಪ್ರಾಧಿಕಾರದಿಂದ ಅನುಮೋದಿತ ನಕ್ಷೆ ಪಡೆಯದೇ ನಿವೇಶನಗಳನ್ನು / ಕಟ್ಟಡಗಳನ್ನು ಸಂಬಂಧಪಟ್ಟ ನೋಂದಣಾಧಿಕಾರಿಗಳಿಂದ / ಉಪ ನೋಂದಣಾಧಿಕಾರಿಗಳಿಂದ ನೋಂದಾವಣೆ ಮಾಡತಕ್ಕದ್ದಲ್ಲ. ಖಾತೆದಾರರು ಒಂದು ವೇಳೆ ಭೂ ಪರಿವರ್ತನೆ ಮಂಜೂರು ಮಾಡಿರುವ ಜಮೀನಿನ ಪೂರ್ಣ ವಿಸ್ತೀರ್ಣವನ್ನು ಮಾರಾಟ ಮಾಡಲು** ಉದ್ದೇಶಿಸಿದಲ್ಲಿ ಈ ಆದೇಶ ಅಡ್ಡಿ ಬರುವುದಿಲ್ಲ.

6. ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಜಮೀನಿನಲ್ಲಿ ನಿವೇಶನದಾರರಿಗೆ ನಾಗರೀಕ ಸೌಲಭ್ಯಗಳಾದ ವಿದ್ಯುಚ್ಛಕ್ತಿ, ನೀರು ಸರಬರಾಜು, ಒಳಚರಂಡಿ ವ್ಯವಸ್ಥೆ ಇತ್ಯಾದಿಗಳನ್ನು ಆರೋಗ್ಯ ನೈರ್ಮಲೀಕರಣ ಹಾಗೂ ಭದ್ರತೆಗಳ ಉದ್ದೇಶದಿಂದ ಎಲ್ಲಾ ಸೌಲಭ್ಯಗಳನ್ನು ಕಾನೂನು ರೀತಿಯ ಒದಗಿಸಿ ಕೊಡುವುದು ಅರ್ಜಿದಾರರ ಜವಾಬ್ದಾರಿಯಾಗಿರುತ್ತದೆ.

7. **ಈ ಜಮೀನಿಗೆ ತಾಕು ಫೋಟು ಖರಾಬ್ ಜಮೀನಿದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 67 ರಂತೆ ಬಿ ಖರಾಬು ವಿಸ್ತೀರ್ಣದ ಜಮೀನು ಇದ್ದಲ್ಲಿ ಆ ಜಮೀನನ್ನು ಸಾರ್ವಜನಿಕ ಉದ್ದೇಶಕ್ಕಾಗಿ ಮೀಸಲಿರಿಸಲಾಗಿದೆ. ಈ ವಿಸ್ತೀರ್ಣದ ಮೇಲೆ ಅರ್ಜಿದಾರರಿಗೆ ಯಾವುದೇ ಹಕ್ಕು ಇರುವುದಿಲ್ಲ. ಈ ಬಿ ಖರಾಬಿನ ವಿಸ್ತೀರ್ಣದ ಹಕ್ಕು ಯಾವಾಗಲೂ ಸರ್ಕಾರಕ್ಕೆ ಸೇರಿರುತ್ತದೆ. ತಹಸೀಲ್ದಾರ್‌ರವರು ಈ ಬಾಬ್ತು ಆರ್.ಟಿ.ಸಿ.ಯಲ್ಲಿ ಸ್ಪಷ್ಟವಾಗಿ ನಮೂದಿಸತಕ್ಕದ್ದು.**

8. ಸರ್ಕಾರದ ಆದೇಶ ಸಂಖ್ಯೆ : ಪಿಡಬ್ಲ್ಯೂಡಿ 7556-665 ಆರ್ ಮತ್ತು ಬಿ-6-54-5 ಮತ್ತು ಕೇಂದ್ರ ಸರ್ಕಾರದ ಸಾರಿಗೆ ಇಲಾಖೆಯ ಪತ್ರದ ಸಂಖ್ಯೆ : ಪಿ1/7[11]67, ದಿನಾಂಕ : 1.1.1966 ರಂತೆ ಈ ಜಮೀನಿನಲ್ಲಿ ಕಟ್ಟಲು ಉದ್ದೇಶಿಸಿರುವ ಕಟ್ಟಡವು ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ, ರಸ್ತೆಯ ಮಧ್ಯ ಭಾಗದಿಂದ 40 ಮೀಟರ್‌ಗಳ ಅಂತರವನ್ನು ಮತ್ತು ಜಿಲ್ಲಾ ಹೆದ್ದಾರಿಗೆ ಸಂಬಂಧಿಸಿದಂತೆ, ರಸ್ತೆಯ ಮಧ್ಯ ಭಾಗದಿಂದ 25 ಮೀಟರ್‌ಗಳ ಅಂತರವನ್ನು ಕಾದಿರಿಸಬೇಕು ಹಾಗೂ ಈ ಖಾಲಿ ಪ್ರದೇಶದಲ್ಲಿ ಯಾವುದೇ ಕಟ್ಟಡವನ್ನು ಕಟ್ಟಬಾರದು.

9. **ಭೂ ಪರಿವರ್ತನೆ ಮಂಜೂರಿ ಯಾವ ಉದ್ದೇಶಕ್ಕೆ ಆಗಿರುತ್ತದೆಯೋ ಅದೇ ಉದ್ದೇಶಕ್ಕೆ ಈ ದಿನದಿಂದ ಎರಡು ವರ್ಷಗಳ ಒಳಗಾಗಿ ಉಪಯೋಗಿಸತಕ್ಕದ್ದು.**

10. ಈ ಆದೇಶವು ಸದರಿ ಜಮೀನಿಗೆ ಸಂಬಂಧಪಟ್ಟಂತೆ ಯಾವುದೇ ನ್ಯಾಯಾಲಯದಲ್ಲಿನ ದಾವೆ / ರಿಟ್ ಅರ್ಜಿ / ಮೇಲ್ಮನವಿಯ ತೀರ್ಪಿಗೆ ಒಳಪಟ್ಟಿರುತ್ತದೆ.

11. ಈ ಆದೇಶವು ಸದರಿ ಜಮೀನಿಗೆ ಸಂಬಂಧಪಟ್ಟಂತೆ ಯಾವುದೇ ನ್ಯಾಯಾಲಯದಲ್ಲಿನ ದಾವೆ / ರಿಟ್ ಅರ್ಜಿ / ಮೇಲ್ಮನವಿಯ ತೀರ್ಪಿಗೆ ಒಳಪಟ್ಟಿರುತ್ತದೆ.

12. ಪ್ರಸ್ತಾವಿತ ಜಮೀನಿನ ಬಗ್ಗೆ ಯಾವುದೇ ಭೂ ಸ್ವಾಧೀನ ಪ್ರಕ್ರಿಯೆಗೆ ಒಳಪಟ್ಟಿದಲ್ಲಿ ಈ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ.

13 ಪರಿಷ್ಕೃತ ಮಾಸ್ಟರ್ ಪ್ಲಾನ್ 2015ರಲ್ಲಿ ಸೂಕ್ಷ್ಮ ವಲಯ [*Sensitive Zone*] ನಲ್ಲಿ ಬರುವ ಪ್ರದೇಶಗಳಿಗೆ ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ, ಬೆಂಗಳೂರು ಇವರಿಗೆ ಭೂ ಪರಿವರ್ತನೆ ಬಗ್ಗೆ ಮಾಹಿತಿ ನೀಡುವಾಗ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೇ ಉದ್ದೇಶಿತ ಭಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿಯನ್ನು ಕೈಗೊಳ್ಳಬಾರದೆಂಬ ಷರತ್ತನ್ನು ವಿಧಿಸುವುದು.

14. ಉದ್ದೇಶಿತ ಜಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿ ಚಟುವಟಿಕೆಗಳನ್ನು ಕೈಗೊಳ್ಳಬೇಕಾದಲ್ಲಿ ಪ್ರಾಧಿಕಾರದಿಂದ ರಚಿತವಾದ ಉಪಸಮಿತಿಯ ನಿರ್ಣಯದಂತೆ ನಕ್ಷೆಗಳನ್ನು ಅನುಮೋದಿಸಿಕೊಳ್ಳತಕ್ಕದ್ದು.

15. ಪ್ರಶ್ನಿತ ಜಮೀನು ಸರ್ಕಾರಿ ಜಮೀನು ವ್ಯಾಪ್ತಿಗೆ ಒಳಪಟ್ಟಲ್ಲಿ, ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ 136 [3] ರ ಅಡಿ ವಿಚಾರಣೆ ನಡೆಸಿ ಹೊರಡಿಸುವ ತೀರ್ಮಾನಕ್ಕೆ ಒಳಪಟ್ಟಿರುತ್ತದೆ.

16. ಸದರಿ ಜಮೀನು ಮಂಜೂರಾದ ಸರ್ಕಾರಿ ಜಮೀನಾಗಿದ್ದಲ್ಲಿ ತಕ್ಷಣವೇ ಮೋಡಿ ಮಾಡಿಸುವ ಷರತ್ತಿಗೆ ಒಳಪಟ್ಟಿರುತ್ತದೆ.

17. ಅರ್ಜಿದಾರರು ಯಾವುದೇ ಸತ್ಯಾಂಶಗಳನ್ನು ಮರೆ ಮಾಚಿ, ಅನಧಿಕೃತ ದಾಖಲೆಗಳ ಮೇಲೆ ಈ ಅಧಿಕೃತ ಜ್ಞಾಪನ ಪಡೆದಿರುವುದು ದೃಢಪಟ್ಟಲ್ಲಿ ನಂತರ ಇನ್ನಾವುದೇ ತಿಳುವಳಿಕೆ ಇಲ್ಲದೆ ಈ ಅಧಿಕೃತ ಜ್ಞಾಪನ ತಕ್ಷಣವೇ ರದ್ದುಗೊಳ್ಳುತ್ತದೆ ಹಾಗೂ ಇದರಿಂದ ಅರ್ಜಿದಾರರಿಗಾಗಲೀ ಅಥವಾ ಅವರ ಉತ್ತರಾಧಿಕಾರಿಗಳಿಗಾಗಲೀ ಆಗುವ ಯಾವುದೇ ಲುಕ್ಸಾನಿಗೆ ಸರ್ಕಾರವಾಗಲೀ ಅಥವಾ ಈ ಪ್ರಾಧಿಕಾರವಾಗಲೀ ಯಾವುದೇ ರೀತಿಯ ಜವಾಬ್ದಾರರಾಗಿರುವುದಿಲ್ಲ. ಇದರ ಪೂರ್ಣ ಹೊಣೆಗಾರಿಕೆ ಅರ್ಜಿದಾರರದ್ದೇ ಆಗಿರುತ್ತದೆ.

ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಭೂ ಪರಿವರ್ತನೆ ಆದೇಶ ಯಾವುದೇ ಸೂಚನೆ ನೀಡದೆ ರದ್ದುಗೊಳಿಸಲಾಗುವುದು ಮತ್ತು ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 96 ರಂತೆ ದಂಡ ಶುಲ್ಕವನ್ನು ವಿಧಿಸಲು

Scanned by CamScanner

ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು ಅಲ್ಲದೇ ಈ ಜಮೀನಿನಲ್ಲಿ ಅನಧಿಕೃತವಾಗಿ ಕಟ್ಟಿದ ಕಟ್ಟಡಗಳನ್ನು ಯಾವುದೇ ಪರಿಹಾರ ನೀಡದೆ ಕೆಡವಲು ಕ್ರಮ ತೆಗೆದುಕೊಳ್ಳಲಾಗುವುದು ಹಾಗೂ ಅದಕ್ಕೆ ತಗಲುವ ವೆಚ್ಚವನ್ನು ಭೂ ಕಂದಾಯ ಬಾಕಿ ಎಂದು ಖಾತೆದಾರರಿಂದ ವಸೂಲಿ ಮಾಡಲಾಗುವುದು.

<u>ಷೆ ಡ್ಯೂ ಲ್ ವಿ ವ ರ</u>

ಬೆಂಗಳೂರು ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ದೊಡ್ಡತೋಗೂರು ಗ್ರಾಮದ ಸರ್ವೆ ನಂ : 135 ರಲ್ಲಿ 0-12 ಗುಂಟೆ ವಿಸ್ತೀರ್ಣಕ್ಕೆ ಭೂ ಪರಿವರ್ತಿತ ಜಮೀನಿಗೆ ಚೆಕ್ಕುಬಂದಿ :

| | | |
|---|---|---|
| ಪೂರ್ವಕ್ಕೆ | : | ಸರ್ವೆ ನಂ : 135ರ ಉಳಿಕೆ ಜಮೀನು |
| ಪಶ್ಚಿಮಕ್ಕೆ | : | ರಸ್ತೆ |
| ಉತ್ತರಕ್ಕೆ | : | ಸರ್ವೆ ನಂ : 135ರ ಜಮೀನು |
| ದಕ್ಷಿಣಕ್ಕೆ | : | ಸರ್ವೆ ನಂ : 135ರ ಉಳಿಕೆ ಜಮೀನು |

ಸಹಿ/-
[ಹೆಚ್.ರಾಮಾಂಜನೇಯ]
ವಿಶೇಷ ಜಿಲ್ಲಾಧಿಕಾರಿಗಳು [ಕಂದಾಯ],
ಬೆಂಗಳೂರು ಜಿಲ್ಲೆ, ಬೆಂಗಳೂರು.

ಪ್ರತಿಯನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ ಕೆಳಕಂಡವರಿಗೆ ಕಳುಹಿಸಿದೆ.

1. ತಹಸೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು ರವರಿಗೆ ಮೂಲ ಕಡತ ಹಾಗೂ ಚಲನ್‌ನೊಂದಿಗೆ ಕಳುಹಿಸುತ್ತಾ ಈ ಆದೇಶದ ಪ್ರಕಾರ ಸಂಬಂಧಪಟ್ಟ ಸರ್ವೆ ನಂಬರ್ ಭೂ ಪರಿವರ್ತನೆಯಾಗಿದೆ ಎಂದು ಸಂಬಂಧಪಟ್ಟ ಗಣಕೀಕೃತ ಆರ್.ಟಿ.ಸಿಯಲ್ಲಿ ನಮೂದಿಸತಕ್ಕದ್ದು ಮತ್ತು ಈ ಜಮೀನಿಗೆ ಖಾತೇದಾರರ ಲೆಕ್ಕದಲ್ಲಿ ಸದರಿ ಜಮೀನಿನ ಭೂ ಕಂದಾಯವನ್ನು ಕಡಿಮೆಗೊಳಿಸಲಾಗುವುದು.
2. ಸದಸ್ಯ ಕಾರ್ಯದರ್ಶಿಗಳು, ಬಿ.ಎಂ.ಐ.ಸಿ.ಪಿ.ಎ., ಬೆಂಗಳೂರು ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
3. ಉಪವಿಭಾಗಾಧಿಕಾರಿಗಳು ಬೆಂಗಳೂರು ದಕ್ಷಿಣ ಉಪವಿಭಾಗ, ಬೆಂಗಳೂರು.
4. ಉಪನಿರ್ದೇಶಕರು, ಭೂ ಮಾಪನ ಮತ್ತು ಭೂ ದಾಖಲೆಗಳ ಇಲಾಖೆ, ಬೆಂಗಳೂರು ಉಪವಿಭಾಗ, ಬೆಂಗಳೂರು.
5. ಉಪ ನೋಂದಣಾಧಿಕಾರಿಗಳು, ಬೇಗೂರು ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ಇವರಿಗೆ ಮಾಹಿತಿಗಾಗಿ.
6. ಅರ್ಜಿದಾರರು : ಶ್ರೀ ಎಂ. ಶ್ರೀನಿವಾಸ್, ದೊಡ್ಡತೋಗೂರು ಗ್ರಾಮ, ಬೇಗೂರು ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ರವರಿಗೆ ದೃಢೀಕೃತ ಅಂಚೆ ಮೂಲಕ.
7. ಹೆಚ್ಚಿನ ಪ್ರತಿ.

ವಿಶೇಷ ಜಿಲ್ಲಾಧಿಕಾರಿ [ಕಂದಾಯ],
ಬೆಂಗಳೂರು ಜಿಲ್ಲೆ, ಬೆಂಗಳೂರು.

Scanned by CamScanner

ಕರ್ನಾಟಕ ಸರ್ಕಾರ

ಸಂ:ಎಎಲ್‌ಎನ್:(ಎಸ್.ಬಿ.):(ಬಿ.ಹೆಚ್.)ಎಸ್‌ಆರ್:4/11-12.

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ಬೆಂಗಳೂರು ಜಿಲ್ಲೆ,
ಬೆಂಗಳೂರು, ದಿನಾಂಕ: -07-2011.

ಅಧಿಕೃತ ಜ್ಞಾಪನ

ವಿಷಯ:- ಬೆಂಗಳೂರು ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ದೊಡ್ಡತೋಗೂರು ಗ್ರಾಮದ ಸರ್ವೆ ನಂ. 135 ರಲ್ಲಿ 0-17 ಗುಂಟೆ (ಆಂಜಿನಪ್ಪ ಮತ್ತು ಸರಸ್ವತಮ್ಮ 0-03 ಗುಂಟೆ, ವೆಂಕಟೇಶಪ್ಪ ನಾಗರಾಜ ಶಿವಪ್ಪ 0-14 ಗುಂಟೆ) ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ ಭೂ ಪರಿವರ್ತನೆ ಕೋರಿ ಶ್ರೀ (1) ವೆಂಕಟೇಶಪ್ಪ (2) ನಾಗರಾಜ (3) ಶಿವಪ್ಪ (4) ಆಂಜಿನಪ್ಪ ಮತ್ತು ಸರಸ್ವತಮ್ಮ, ದೊಡ್ಡತೋಗೂರು, ಬೇಗೂರು ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು ರವರು ಸಲ್ಲಿಸಿರುವ ಅರ್ಜಿ ದಿನಾಂಕ: 13-4-2011.

ಉಲ್ಲೇಖ:-
1. ಸರ್ಕಾರದ ಸುತ್ತೋಲೆ ಸಂಖ್ಯೆ:ಆರ್‌ಡಿ 7 ಎಲ್‌ಜಿಪಿ 95 ದಿನಾಂಕ: 7-6-1999.
2. ಸರ್ಕಾರದ ಸುತ್ತೋಲೆ ಸಂಖ್ಯೆ:ಆರ್.ಡಿ:56:ಎಲ್‌ಜಿಪಿ/2008 ದಿನಾಂಕ:10-9-08 ಮತ್ತು 24-9-2008.
3. ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು, ರವರ ವರದಿ ಸಂಖ್ಯೆ:ಎಎಲ್‌ಎನ್: ಎಸ್‌ಆರ್:21/11-12, ದಿನಾಂಕ: 26-4-2011.
4. ಭೂ ಪರಿವರ್ತನಾ ಶುಲ್ಕ ರೂ. 23,142-00 ಹಾಗೂ ಪೋಡಿ ಶುಲ್ಕ ರೂ. 55-00 ಒಟ್ಟು ರೂ. 23,197-00 ಗಳನ್ನು ಚಲನ್ ನಂಬರ್-69 & 70 ರಂತೆ ದಿನಾಂಕ: 26-7-2011 ರಂದು ಎಸ್.ಬಿ.ಎಂ. ಶಾಖೆಗೆ ಅರ್ಜಿದಾರರು ಜಮಾ ಮಾಡಿರುತ್ತಾರೆ.
5. ಬೆಂಗಳೂರು-ಮೈಸೂರು ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್ ಸ್ಥಳೀಯ ಯೋಜನಾ ಪ್ರಾಧಿಕಾರ ನಗರ ಯೋಜನಾ ಹೆಚ್ಚುವರಿ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿಗಳ ಪತ್ರ ಸಂಖ್ಯೆ:ಬಿ.ಎಂಐಸಿಪಿಎ /15/ಭೂಪ/82/10-11, ದಿನಾಂಕ: 8-7-2011 ಮತ್ತು ವಿಶೇಷ ಭೂಸ್ವಾಧೀನಾಧಿಕಾರಿಗಳು, ರವರ ಪತ್ರದ ಸಂಖ್ಯೆ:ಬಿಎಂಐಸಿಪಿ/ಎಲ್‌ಎಕ್ಯೂ(1):ಸಿಆರ್:71/11-12, ದಿನಾಮಕ: 15-4-2011.

:: 0 ::

ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ರ ಕಲಂ 95(2), 95(4) ಮತ್ತು 95(7) ರ ಷರತ್ತುಗಳು, ಹಾಗೂ ಷರತ್ತುಗಳಿಗೊಳಪಡಿಸಿ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ನಿಯಮಗಳು 1994 ರ ನಿಯಮ 107(1) ರಂತೆ ಎಕರೆ ಒಂದಕ್ಕೆ ರೂ.54,450-00 (ರೂಪಾಯಿಗಳು ಐವತ್ನಾಲ್ಕು ಸಾವಿರದ ನಾಲ್ಕು ನೂರ ಐವತ್ತು) ಗಳಂತೆ ಅರ್ಜಿದಾರರು ಉಲ್ಲೇಖ (5) ರಲ್ಲಿ ನಮೂದಿಸಿರುವಂತೆ ಹಣವನ್ನು ಜಮಾ ಮಾಡಿದ ಮೇರೆಗೆ, ಅರ್ಜಿದಾರರಾದ ಶ್ರೀ (1) ವೆಂಕಟೇಶಪ್ಪ (2) ನಾಗರಾಜ (3) ಶಿವಪ್ಪ (4) ಆಂಜಿನಪ್ಪ ದೊಡ್ಡತೋಗೂರು, ಬೇಗೂರು ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು ರವರ ಅರ್ಜಿಯನ್ನು ಪರಿಗಣಿಸಿ, ಬೆಂಗಳೂರು ದಕ್ಷಿಣ ತಾಲ್ಲೂಕು, ದೊಡ್ಡತೋಗೂರು ಗ್ರಾಮದ ಸರ್ವೆ ನಂ. 135 ರಲ್ಲಿ 0-17 ಗುಂಟೆ (ಆಂಜಿನಪ್ಪ ಮತ್ತು ಸರಸ್ವತಮ್ಮ 0-03 ಗುಂಟೆ, ವೆಂಕಟೇಶಪ್ಪ ನಾಗರಾಜ ಶಿವಪ್ಪ 0-14 ಗುಂಟೆ) ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ ಬಳಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭೂ ಪರಿವರ್ತನಾ ಆದೇಶವನ್ನು ಹೊರಡಿಸಲಾಗಿದೆ.

1. ಈ ಭೂಮಿಯು ಯಾವ ಉದ್ದೇಶಕ್ಕಾಗಿ ಪರಿವರ್ತನೆಯಾಗಿದೆಯೋ ಆ ಉದ್ದೇಶಕ್ಕೆ ಉಪಯೋಗಿಸಿಕೊಳ್ಳಲು ಸಕ್ಷಮ ಪ್ರಾಧಿಕಾರ ಅಂದರೆ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿ.ಎಂ.ಆರ್.ಡಿ.ಎ./(ಸ್ಥಳೀಯ ಯೋಜನಾ ಪ್ರಾಧಿಕಾರ)/ ಬಿ.ಎಂ.ಐ.ಸಿ.ಪಿ.ಎ/ ಮಾಲಿನ್ಯ ನಿಯಂತ್ರಣಾ ಮಂಡಳಿ ರವರಿಂದ ಮಂಜೂರಾತಿಯನ್ನು ಪಡೆಯದ ಹೊರತು ಈ ಆದೇಶವು ಅನುಭವದಾರನಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ.

2. ಈ ಭೂ ಪರಿವರ್ತಿತ ಜಮೀನನ್ನು ವಾಸದ ಉದ್ದೇಶಕ್ಕಾಗಿ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು. ಈ ಜಮೀನನ್ನು ಪೂರ್ವಾನುಮತಿ ಇಲ್ಲದೇ ಬೇರೆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಬಾರದು.

3. ಈ ಜಮೀನಿನಲ್ಲಿ ಉದ್ದೇಶಿಸಿರುವ ಬಡಾವಣೆ ನಕ್ಷೆ ಹಾಗೂ ಪರವಾನಗಿ ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿ.ಎಂ.ಆರ್.ಡಿ.ಎ./(ಸ್ಥಳೀಯ ಯೋಜನಾ ಪ್ರಾಧಿಕಾರ)/ ಬಿ.ಎಂ.ಐ.ಸಿ.ಪಿ.ಎ/ ಪ್ರಾಧಿಕಾರದಿಂದ ಅನುಮೋದಿಸಿಕೊಂಡು ಈ ನಂತರ ಅನುಮೋದಿಸಿಕೊಂಡ ನಕ್ಷೆಗೆ ಅನುಗುಣವಾಗಿ ಕಟ್ಟಡವನ್ನು ಕಟ್ಟುವುದು. ಸದರಿ ಜಮೀನಿನಲ್ಲಿ ಲೇಔಟ್ / ಕಟ್ಟಡ ನಕ್ಷೆಗೆ ಅನುಮೋದನೆ ಪಡೆಯದೆ ಪರಭಾರೆ ಮಾಡಕೂಡದು.

—2.

Scanned by CamScanner

4. ಇತರೆ ಅವಶ್ಯವಾದ ರಸ್ತೆ ಜಾಗ, ರಸ್ತೆ ಮಾರ್ಜಿನ್, ಉದ್ಯಾನವನ, ಸಿ.ಎ.ನಿವೇಶನ ಖಾಲಿ ಜಾಗ, ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿ.ಎಂ.ಆರ್.ಡಿ.ಎ./(ಸ್ಥಳೀಯ ಯೋಜನಾ ಪ್ರಾಧಿಕಾರ)/ ಬಿ.ಎಂ.ಐ.ಸಿ... ಪ್ರಾಧಿಕಾರದಿಂದ ಅನುಮೋದಿಸಿದ ಬಡಾವಣೆ ನಕ್ಷೆ ಪ್ರಕಾರ ಹಾಗೂ ನಿರ್ದಿಷ್ಟಪಡಿಸಿದ ನಿಯಮಗಳ ರೀತ್ಯಾ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು.

5. ಸಂಬಂಧಪಟ್ಟ ಪ್ರಾಧಿಕಾರದಿಂದ ಅನುಮೋದಿತ ನಕ್ಷೆ ಪಡೆಯದೆ ನಿವೇಶನಗಳನ್ನು/ಕಟ್ಟಡಗಳನ್ನು ಸಂಬಂಧಪಟ್ಟ ನೋಂದಣಾಧಿಕಾರಿಗಳಿಂದ / ಉಪನೋಂದಣಾಧಿಕಾರಿಗಳಿಂದ ನೋಂದಾವಣೆ ಮಾಡತಕ್ಕದ್ದಲ್ಲ, ಖಾತೆದಾರರು ಒಂದು ವೇಳೆ ಭೂ ಪರಿವರ್ತನೆ ಮಂಜೂರು ಮಾಡಿರುವ ಜಮೀನಿನ ಪೂರ್ಣ ವಿಸ್ತೀರ್ಣವನ್ನು ಮಾರಾಟ ಮಾಡಲು ಉದ್ದೇಶಿಸಿದಲ್ಲಿ ಈ ಆದೇಶ ಅಡ್ಡಿ ಬರುವುದಿಲ್ಲ.

6. ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಜಮೀನಿನಲ್ಲಿ ನಿವೇಶನದಾರರಿಗೆ ನಾಗರೀಕ ಸೌಲಭ್ಯಗಳಾದ ವಿದ್ಯುಚ್ಛಕ್ತಿ, ಕುಡಿಯುವ ನೀರು ರಸ್ತೆ, ಸರಬರಾಜು, ಒಳಚರಂಡಿ ವ್ಯವಸ್ಥೆ ಇತ್ಯಾದಿಗಳನ್ನು ಆರೋಗ್ಯ ನೈರ್ಮಲೀಕರಣ ಹಾಗೂ ಭದ್ರತೆಗಳ ಉದ್ದೇಶದಿಂದ ಈ ಎಲ್ಲಾ ಸೌಲಭ್ಯಗಳನ್ನು ಕಾನೂನು ರೀತ್ಯ ಒದಗಿಸಿಕೊಡುವುದು ಅರ್ಜಿದಾರರ ಜವಾಬ್ದಾರಿಯಾಗಿರುತ್ತದೆ.

7. ಈ ಜಮೀನಿಗೆ ತಾಕು ಪೋಟ್ ಖರಾಬ್ ಜಮೀನು ಇದ್ದಲ್ಲಿ, ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 67 ರಂತೆ ಸರ್ಕಾರದ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು. ತಹಶೀಲ್ದಾರರವರು ಈ ಬಾಬ್ತು ಆರ್.ಟಿ.ಸಿ.ಯಲ್ಲಿ ಸ್ಪಷ್ಟವಾಗಿ ನಮೂದಿಸತಕ್ಕದ್ದು.

8. ಸರ್ಕಾರದ ಆದೇಶ ಸಂಖ್ಯೆ ಪಿಡಬ್ಲ್ಯೂಡಿ 7556–665 ಆರ್ ಮತ್ತು ಬಿ–6–54–5 ಮತ್ತು ಕೇಂದ್ರ ಸರ್ಕಾರದ ಸಾರಿಗೆ ಇಲಾಖೆಯ ಪತ್ರದ ನಂ. ಪಿ.1/7(11)67, ದಿನಾಂಕ: 01–01–1966 ರಂತೆ ಸರ್ಕಾರವು ಕಾಲಕಾಲಕ್ಕೆ ನೀಡುವ ಆದೇಶದಂತೆ ಈ ಜಮೀನಿನಲ್ಲಿ ಕಟ್ಟಲು ಉದ್ದೇಶಿಸಿರುವ ಕಟ್ಟಡವು ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 40 ಮೀಟರ್‌ಗಳ ಅಂತರವನ್ನು ಮತ್ತು ಜಿಲ್ಲಾ ಹೆದ್ದಾರಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 25 ಮೀಟರ್‌ಗಳ ಅಂತರವನ್ನು ಕಾಯ್ದಿರಿಸಬೇಕು ಹಾಗೂ ಈ ಖಾಲಿ ಪ್ರದೇಶದಲ್ಲಿ ಯಾವುದೇ ಕಟ್ಟಡವನ್ನು ಕಟ್ಟಬಾರದು.

9. ಈ ಭೂ ಪರಿವರ್ತನಾ ಜಮೀನಿನಲ್ಲಿ ಸ್ಥಾಪಿಸಲಾಗುವ ಕೈಗಾರಿಕಾ ಘಟಕಗಳು ಹೊರದೂಡುವ ಹೊಗೆ, ಅನಿಲ, ಇತರೆ ಕಲ್ಮಶಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಿ ಸಾರ್ವಜನಿಕರ ಆರೋಗ್ಯಕ್ಕೆ ಯಾವುದೇ ರೀತಿಯ ಹಾನಿಯಾಗದಂತೆ ಹಾಗೂ ಪರಿಸರ ಮಾಲಿನ್ಯವಾಗದಂತೆ ನೋಡಿಕೊಳ್ಳತಕ್ಕದ್ದು. ಕೈಗಾರಿಕಾ ಉದ್ದೇಶಕ್ಕಾಗಿ ಭೂ ಪರಿವರ್ತಿತ ಜಮೀನಿನಲ್ಲಿ ಸ್ಥಾಪಿಸುವ ಕೈಗಾರಿಕಾ ಘಟಕಗಳು ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ಪರಿಸರ ಇಲಾಖೆಯ ಅನುಮತಿ ಹೊಂದಿರತಕ್ಕದ್ದು.

10. ಈ ಆದೇಶವು ಸದರಿ ಜಮೀನಿಗೆ ಸಂಬಂಧಪಟ್ಟಂತೆ ಯಾವುದೇ ನ್ಯಾಯಾಲಯದಲ್ಲಿನ ದಾವೆ / ರಿಟ್ ಅರ್ಜಿ/ ಮೇಲ್ಮನವಿಯ ತೀರ್ಪಿಗೆ ಒಳಪಟ್ಟಿರುತ್ತದೆ.

11. ಪ್ರಸ್ತಾವಿತ ಜಮೀನಿನ ಬಗ್ಗೆ ಯಾವುದೇ ಭೂಸ್ವಾಧೀನ ಪ್ರಕ್ರಿಯೆಗೆ ಒಳಪಟ್ಟದ್ದಲ್ಲಿ ಈ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ.

12. ಪ್ರಶ್ನಿತ ಜಮೀನು ಸರ್ಕಾರಿ ಜಮೀನು ವ್ಯಾಪ್ತಿಗೆ ಒಳಪಟ್ಟದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 136(3) ರ ಅಡಿ ವಿಚಾರಣೆ ನಡೆಸಿ ಹೊರಡಿಸುವ ತೀರ್ಮಾನಕ್ಕೆ ಒಳಪಟ್ಟಿರುತ್ತದೆ.

13. ಪರಿಷ್ಕೃತ ಮಾಸ್ಟರ್ ಪ್ಲಾನ್ –2015 ರಲ್ಲಿ ಸೂಕ್ಷ್ಮ ವಲಯ (Sensitive Zone) ನಲ್ಲಿ ಬರುವ ಪ್ರದೇಶಗಳಿಗೆ ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ ಇವರಿಗೆ ಭೂ ಪರಿವರ್ತನೆ ಬಗ್ಗೆ ಮಾಹಿತಿ ನೀಡುವಾಗ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೇ ಉದ್ದೇಶಿತ ಬಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿಯನ್ನು ಕೈಗೊಳ್ಳಬಾರದೆಂಬ ಷರತ್ತನ್ನು ವಿಧಿಸುವುದು.

14. ಉದ್ದೇಶಿತ ಜಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿ ಚಟುವಟಿಕೆಗಳನ್ನು ಕೈಗೊಳ್ಳಬೇಕಾದಲ್ಲಿ ಪ್ರಾಧಿಕಾರದಿಂದ ರಚಿತವಾದ ಉಪ ಸಮಿತಿಯ ನಿರ್ಣಯದಂತೆ ನಕ್ಷೆಗಳನ್ನು ಅನುಮೋದಿಸಿಕೊಳ್ಳತಕ್ಕದ್ದು.

15. ಪ್ರಶ್ನಿತ ಜಮೀನು ಸರ್ಕಾರಿ ಜಮೀನು ಮಂಜೂರಾದ ಸರ್ಕಾರಿ ಜಮೀನಾಗಿದ್ದಲ್ಲಿ ತಕ್ಷಣವೇ ಪಕ್ಕ ಪೋಡಿ ಮಾಡಿಸುವ ಷರತ್ತಿಗೆ ಒಳಪಟ್ಟಿರುತ್ತದೆ.

16. ಅರ್ಜಿದಾರರು ಯಾವುದೇ ಸತ್ಯಾಂಶಗಳನ್ನು ಮರೆ ಮಾಚಿ, ಅನಧಿಕೃತ ದಾಖಲೆಗಳ ಮೇಲೆ ಈ ಅಧಿಕೃತ ಜ್ಞಾಪನ ಪಡೆದಿರುವುದು ಸ್ಪಷ್ಟಪಟ್ಟಲ್ಲಿ ತನ್‌ತಾನೇ ರದ್ದುಗೊಳ್ಳುತ್ತದೆ ಹಾಗೂ ಇದರಿಂದ ಅರ್ಜಿದಾರರಿಗಾಗಲೀ ಅಥವಾ ಅವರ ಉತ್ತರಾಧಿಕಾರಿಗಳಿಗಾಗಲೀ ಆಗುವ ಯಾವುದೇ ಲುಕ್ಸಾನಿಗೆ ಸರ್ಕಾರವಾಗಲೀ ಅಥವಾ ಈ ಪ್ರಾಧಿಕಾರವಾಗಲೀ ಯಾವುದೇ ರೀತಿಯ ಜವಾಬ್ದಾರರಾಗಿರುವುದಿಲ್ಲ. ಇದರ ಪೂರ್ಣ ಹೊಣೆಗಾರಿಕೆ ಅರ್ಜಿದಾರರದ್ದೇ ಆಗಿರುತ್ತದೆ.

—3.

Scanned by CamScanner

ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಭೂ ಪರಿವರ್ತನೆ ಆದೇಶವನ್ನು ಯಾವುದೇ ಸೂಚನೆ ನೀಡದೇ ರದ್ದುಗೊಳಿಸಲಾಗುವುದು ಮತ್ತು ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 96 ರಂತೆ ದಂಡ ಶುಲ್ಕವನ್ನು ವಿಧಿಸಲು ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು. ಅಲ್ಲದೇ ಈ ಜಮೀನಿನಲ್ಲಿ ಅನಧಿಕೃತವಾಗಿ ಕಟ್ಟಿದ ಕಟ್ಟಡಗಳನ್ನು ಯಾವುದೇ ಪರಿಹಾರ ನೀಡದೇ ಕೆಡವಲು ಕ್ರಮ ತೆಗೆದುಕೊಳ್ಳಲಾಗುವುದು. ಹಾಗೂ ಅದಕ್ಕೆ ತಗಲುವ ವೆಚ್ಚವನ್ನು ಭೂ ಕಂದಾಯ ಬಾಕಿ ಎಂದು ಖಾತೇದಾರರಿಂದ ವಸೂಲಿ ಮಾಡಲಾಗುವುದು.

ಷೆಡ್ಯೂಲ್ ವಿವರ

ಬೆಂಗಳೂರು ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ದೊಡ್ಡತೋಗೂರು ಗ್ರಾಮದ ಸರ್ವೆ ನಂ. 135 ರಲ್ಲಿ 0-17 ಗುಂಟೆ ಭೂ ಪರಿವರ್ತಿತ ಜಮೀನಿನ ಚಕ್ಕುಬಂದಿ:

-: ಚೆಕ್ಕುಬಂದಿ :-

| | |
|---|---|
| ಪೂರ್ವಕ್ಕೆ | ಸರ್ವೆ ನಂ. 45 ರ ಜಮೀನು ಹಾಗೂ ಚಿಕ್ಕತೋಗೂರು ಗಡಿ |
| ಪಶ್ಚಿಮಕ್ಕೆ | ರಸ್ತೆ ಮತ್ತು ಇದೇ ಸರ್ವೆ ನಂ. 135 ರ ಉಳಿಕೆ ಜಮೀನು |
| ಉತ್ತರಕ್ಕೆ | ರಸ್ತೆ |
| ದಕ್ಷಿಣಕ್ಕೆ | ಇದೇ ಸರ್ವೆ ನಂ. 135 ರ ಉಳಿಕೆ ಜಮೀನು |

ಸಹಿ/-
(ಜಿ.ಎಸ್.ನಾಯಕ್),
ವಿಶೇಷ ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.

ಪ್ರತಿಯನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ/ ಮಾಹಿತಿಗಾಗಿ ಕೆಳಕಂಡವರಿಗೆ ಕಳುಹಿಸಲಾಗಿದೆ.

1. ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ರವರಿಗೆ ಮೂಲ ಕಡತ ಹಾಗೂ ಚಲನ್‌ದೊಂದಿಗೆ ಕಳುಹಿಸುತ್ತಾ ಈ ಆದೇಶದ ಪ್ರಕಾರ ಸಂಬಂಧಪಟ್ಟ ಸರ್ವೆ ನಂಬರ್ ಭೂ ಪರಿವರ್ತನೆಯಾಗಿದೆ ಎಂದು ಸಂಬಂಧಪಟ್ಟ ಆರ್.ಟಿ.ಸಿ.ಯಲ್ಲಿ ಕೂಡಲೇ ನಮೂದಿಸತಕ್ಕದ್ದು. ಮತ್ತು ಈ ಜಮೀನಿಗೆ ಖಾತೇದಾರರ ಲೆಕ್ಕದಲ್ಲಿ ಸದರಿ ಜಮೀನಿನ ಭೂ ಕಂದಾಯವನ್ನು ಕಡಿಮೆಗೊಳಿಸುವುದು.
2. ಸದಸ್ಯ ಕಾರ್ಯದರ್ಶಿಗಳು, ಬೆಂಗಳೂರು-ಮೈಸೂರು ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್ ಸ್ಥಳೀಯ ಯೋಜನಾ ಪ್ರಾಧಿಕಾರ, ನಗರ ಯೋಜನಾ ನಿರ್ದೇಶಕರ ಕಛೇರಿ, ಪೋಸ್ಟ್ ಬಾಕ್ಸ್ ನಂ. 5257, ಬಹುಮಹಡಿ ಕಟ್ಟಡ, ಗೇಟ್ ನಂ. 4 ಡಾ: ಬಿ.ಆರ್.ಅಂಬೇಡ್ಕರ್ ವೀಧಿ, ಬೆಂಗಳೂರು-01.
3. ಉಪವಿಭಾಗಾಧಿಕಾರಿಗಳು, ಬೆಂಗಳೂರು ದಕ್ಷಿಣ ಉಪವಿಭಾಗ, ಬೆಂಗಳೂರು. ರವರಿಗೆ
4. ಭೂ ಮಾಪನ ತಾಂತ್ರಿಕ ಸಹಾಯಕರು ಹಾಗೂ ಪದನಿಮಿತ್ತ ಭೂ ದಾಖಲೆಗಳ ಉಪನಿರ್ದೇಶಕರು, ಜಿಲ್ಲಾಧಿಕಾರಿಗಳ ಕಛೇರಿ,ಬೆಂಗಳೂರು. ಇವರಿಗೆ ಆರ್.ಟಿ.ಸಿ ಹಾಗೂ ನಕ್ಷೆಯ ಪ್ರತಿಯೊಂದಿಗೆ ಕಳುಹಿಸುತ್ತಾ ಭೂ ಪರಿವರ್ತನಾ ಪೋಡಿ ಕಾರ್ಯವನ್ನು ಜರೂರಾಗಿ ಪೂರೈಸಲು ಸೂಚಿಸಿದೆ.
5. ಉಪನೋಂದಣಾಧಿಕಾರಿಗಳು, ಬೊಮ್ಮನಹಳ್ಳಿ, ಬೇಗೂರು ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು ರವರಿಗೆ
6. ಅರ್ಜಿದಾರರಾದ ಶ್ರೀ (1) ವೆಂಕಟೇಶಪ್ಪ (2) ನಾಗರಾಜ (3) ಶಿವಪ್ಪ (4) ಆಂಜಿನಪ್ಪ ದೊಡ್ಡತೋಗೂರು, ಬೇಗೂರು ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು ರವರಿಗೆ ದೃಢೀಕೃತ ಅಂಚೆ ಮೂಲಕ ಕಳುಹಿಸಲಾಗಿದೆ.
7. ಹೆಚ್ಚಿನ ಪ್ರತಿ.

27.7.2011

ವಿಶೇಷ ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ,ಬೆಂಗಳೂರು.

Scanned by CamScanner